# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 220 (256) |
| ಸದಸ್ಯರ ಹೆಸರು: | ಡಾ॥ ಯತೀಂದ್ರ ಎಸ್.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 28.01.2026 |
| ಉತ್ತರಿಸುವ ಸಚಿವರು: | ಮಾನ್ಯ ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಂದಾಯ ಇಲಾಖೆಯಲ್ಲಿ ತಹಶೀಲ್ದಾರ್ ಗ್ರೇಡ್-2 ಮತ್ತು ತಹಶೀಲ್ದಾರ್ ಗ್ರೇಡ್-1 ಹುದ್ದೆಗಳು ಬಹಳಷ್ಟು ಖಾಲಿ ಇದ್ದರೂ ಸಹ ಪದೋನ್ನತಿ ನೀಡಲು ಕಳೆದ 3 ವರ್ಷಗಳಿಂದ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು; 3 ವರ್ಷದಲ್ಲಿ ಎಷ್ಟು ಅಧಿಕಾರಿಗಳಿಗೆ ಪದೋನ್ನತಿ ನೀಡಲಾಗಿದೆ? (ಹುದ್ದೆವಾರು ವಿವರ ನೀಡುವುದು) | ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ: 10669- 10676/2021 ಮತ್ತು ಅರ್ಜಿ ಸಂಖ್ಯೆ: 10691-10698/2021 ರಲ್ಲಿನ ದಿನಾಂಕ:23.12.2022ರ ಆದೇಶ, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:103880/2023 ರಲ್ಲಿನ ದಿನಾಂಕ:26.09.2023ರ ಆದೇಶ, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ರಿವ್ಯೂ ಪಿಟಿಷನ್ ಅರ್ಜಿ ಸಂಖ್ಯೆ:2007-2035/2023, ದಿನಾಂಕ:04.12.2023ರ ಆದೇಶ ಹಾಗೂ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:103456-457/2024 ಹಾಗೂ 107924/2024 ದಿನಾಂಕ:25.07.2024ರ ಆದೇಶಗಳನ್ವಯ, ದಿನಾಂಕ:25.06.2021ರಂದು ಪ್ರಕಟಿಸಲಾಗಿದ್ದ ಸ್ಥಳೀಯ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 18.10.2024ರಂದು ಪ್ರಕಟಿಸಲಾಗಿರುತ್ತದೆ.<br><br>ಮುಂದುವರೆದು, ದಿನಾಂಕ:25.06.2021ರ ಕಲ್ಯಾಣ ಕರ್ನಾಟಕ ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಠತಾ ಪಟ್ಟಿಯನ್ನು ಮಾನ್ಯ ನ್ಯಾಯ ಮಂಡಳಿ ಮತ್ತು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ಆದೇಶಗಳನ್ವಯ ಪರಿಷ್ಕರಿಸಿರುವುದರಿಂದ ಉಳಿಕೆ ಮೂಲ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯ ಮೇಲೆಯೂ ಸಹ ಪರಿಣಾಮ ಉಂಟಾಗುತ್ತದೆ. ಹೀಗಾಗಿ ಉಳಿಕೆ ಮೂಲ ವೃಂದದ ಜೇಷ್ಠತಾ ಪಟ್ಟಿಯನ್ನೂ ಸಹ ಪರಿಷ್ಕರಿಸಲು ಸರ್ಕಾರವು ಪ್ರಜ್ಞಾಪೂರ್ವಕವಾಗಿ ಆಡಳಿತಾತ್ಮಕ ತೀರ್ಮಾನ ಕೈಗೊಂಡು, ಮಾನ್ಯ ನ್ಯಾಯಾಲಯಕ್ಕೆ ಸದರಿ ಮಾಹಿತಿಯನ್ನು ನೀಡಿ ದಿನಾಂಕ:18.10.2024 ರಂದು ಉಳಿಕೆ ಮೂಲ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿರುತ್ತವೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಮೇಲ್ಕಂಡ ಆಕ್ಷೇಪಣೆಗಳನ್ನು ಪರಿಶೀಲಿಸಿ, ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ಅಂತಿಮಗೊಳಿಸಲು ಕ್ರಮವಹಿಸಲಾಗಿದೆ. ಮುಂದುವರೆದು, ಕಲ್ಯಾಣ-ಕರ್ನಾಟಕ(HK) ವೃಂದದ ದಿನಾಂಕ:18.10.2024ರ ತಹಶೀಲ್ದಾರ್ ಗ್ರೇಡ್-2 ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ಪ್ರಶ್ನಿಸಿ, ಶ್ರೀ ವಿನಯ್ ಕುಮಾರ್ ಪಾಟೀಲ್, ಕೆ.ಎ.ಎಸ್. (ಕಿ.ಶ್ರೇ.) ಮತ್ತು ಇತರರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:3826-3830/2025ನ್ನು ದಾಖಲಿಸಿದ್ದು, ಮಾನ್ಯ ನ್ಯಾಯ ಮಂಡಳಿಯು ದಿನಾಂಕ:25.08.2025ರ ಮಧ್ಯಂತರ ಆದೇಶದಲ್ಲಿ ಜೇಷ್ಟತಾ ಪಟ್ಟಿಯನ್ನು ಅಂತಿಮಗೊಳಿಸುವ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿರುತ್ತದೆ.<br><br>ಪ್ರಕರಣಕ್ಕೆ ಸಂಬಂಧಿಸಿದಂತೆ, ಸರ್ಕಾರದಿಂದ ಆಕ್ಷೇಪಣಾ ಹೇಳಿಕೆಯನ್ನು ದಾಖಲಿಸಲಾಗಿದೆ. ಮುಂದುವರೆದು, ಮಾನ್ಯ ನ್ಯಾಯ ಮಂಡಳಿಯ ತಡೆಯಾಜ್ಞೆಯನ್ನು ತೆರವುಗೊಳಿಸಲು ಮಧ್ಯಂತರ ಅರ್ಜಿಯನ್ನು ಸಲ್ಲಿಸಲಾಗಿದ್ದು, ಮಾನ್ಯ ನ್ಯಾಯ ಮಂಡಳಿಯ ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿನ ಅರ್ಜಿ ಸಂಖ್ಯೆ:3826-3830/2025 ರಲ್ಲಿನ ತಡೆಯಾಜ್ಞೆ ತೆರವುಗೊಂಡ ನಂತರ ನಿಯಮಾನುಸಾರ ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಟತಾ ಪಟ್ಟಿಗಳನ್ನು ಅಂತಿಮಗೊಳಿಸಿ, ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತದೆ.<br><br>ಕಳೆದ 03 ವರ್ಷಗಳಲ್ಲಿ ತಹಶೀಲ್ದಾರ್ ಗ್ರೇಡ್-2 ವೃಂದದಿಂದ ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ 2 ಅಧಿಕಾರಿಗಳಿಗೆ ಹಾಗೂ ಶಿರಸ್ತೇದಾರ್/ಉಪ ತಹಶೀಲ್ದಾರ್ ವೃಂದದಿಂದ ತಹಶೀಲ್ದಾರ್ ಗ್ರೇಡ್-2 ವೃಂದಕ್ಕೆ 97 ಅಧಿಕಾರಿಗಳಿಗೆ ಸ್ಥಾನಪನ್ನು ಮುಂಬಡ್ತಿ ನೀಡಲಾಗಿರುತ್ತದೆ. |

ಸಂಖ್ಯೆ:ಇ-ಕಂಇ 38 ಎಎಸ್‌ಡಿ 2026

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು